ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 473
2. ಸದಸ್ಯರ ಹೆಸರು : ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸುವ ದಿನಾಂಕ : 04-02-2021
4. ಉತ್ತರಿಸುವವರು : ಮುಖ್ಯಮಂತ್ರಿಗಳು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಬಿಬಿಎಂಪಿ ವ್ಯಾಪ್ತಿಯಲ್ಲಿ ಮುಖ್ಯ ರಸ್ತೆಗಳ ಹಿಂಭಾಗದಲ್ಲಿ ಸಣ್ಣ ಸಣ್ಣ ರಸ್ತೆಗಳಿದ್ದು (ಹಿಂದೆ ಕನ್ಸರ್ವೆನ್ಸ್ ರಸ್ತೆ ಎಂದು ಕರೆಯಲಾಗುತ್ತಿತ್ತು) ಅವುಗಳಿಗೆ ಕಬ್ಬಿಣದ ಗೇಟುಗಳನ್ನು ಯಾವ ಕಾರಣಕ್ಕೆ ಹಾಗೂ ಯಾರು ಹಾಕಿಸಿದ್ದಾರೆ;	ಬಿಬಿಎಂಪಿ ವ್ಯಾಪ್ತಿಯ ಮುಖ್ಯ ರಸ್ತೆಗಳ ಹಿಂಭಾಗದಲ್ಲಿರುವ ಸಣ್ಣ ಸಣ್ಣ ರಸ್ತೆಗಳಿಗೆ ಕಬ್ಬಿಣದ ಗೇಟುಗಳನ್ನು ಅಳವಡಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಯಾವುದೇ ಅನುಮತಿ ನೀಡಿರುವುದಿಲ್ಲ.
ಆ	ಈ ಸಣ್ಣ ರಸ್ತೆಗಳಲ್ಲಿ ಅನೇಕ ಮನೆಗಳಿದ್ದು ಅಲ್ಲಿನ ನಿವಾಸಿಗಳು ಓಡಾಡಲು ಅವಕಾಶವಿದ್ದು ರಾತ್ರಿ ವೇಳೆ ಗೇಟುಗಳನ್ನು ಮುಚ್ಚುವುದರಿಂದ ಅಲ್ಲಿನ ನಿವಾಸಿಗಳಿಗೆ ತೊಂದರೆಯಾಗುವುದಿಲ್ಲವೇ; ಈ ನಿರ್ಧಾರವನ್ನು ತೆಗೆದುಕೊಳ್ಳುವವರು ಯಾರು;	ಬಿಬಿಎಂಪಿ ವ್ಯಾಪ್ತಿಯಲ್ಲಿ ಇಂತಹ ಪ್ರಕರಣಗಳು ವರದಿಯಾಗಿರುವುದಿಲ್ಲ. ಒಂದು ವೇಳೆ ಈ ರೀತಿಯ ಪ್ರಕರಣಗಳು ಕಂಡುಬಂದಲ್ಲಿ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದಲ್ಲಿ, ಸದರಿ ಕಬ್ಬಣದ ಗೇಟುಗಳನ್ನು ತೆರವುಗೊಳಿಸಿ, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಕ್ರಮವಹಿಸಲಾಗುತ್ತದೆ. ಈಗಾಗಲೇ ಇಂತಹ ಪ್ರಕರಣಗಳ ಬಗ್ಗೆ ಪರಿಶೀಲಿಸಿ, ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ದಿನಾಂಕ:17-12-2020ರಂದು ಬಿಬಿಎಂಪಿ ಆಯುಕ್ತರಿಗೆ ನಿರ್ದೇಶನ ನೀಡಲಾಗಿರುತ್ತದೆ.
ಇ	ಮುಖ್ಯ ರಸ್ತೆಯಲ್ಲಿ ವಾಸ ಮಾಡುವ ಮನೆ ಮಾಲೀಕರು ತಮ್ಮ ವಾಹನಗಳನ್ನು ನಿಲ್ಲಿಸಿಕೊಂಡು ಗೇಟಿಗೆ ಬೀಗ ಹಾಕಿಕೊಂಡು ತಮ್ಮ ಸ್ವಂತ ಆಸ್ತಿಯಂತೆ ಉಪಯೋಗಿಸುತ್ತಿದ್ದು; ಇದನ್ನು ತಪ್ಪಿಸಿ ಸಾರ್ವಜನಿಕ ರಸ್ತೆಯನ್ನು ಸಾರ್ವಜನಿಕರ ಉಪಯೋಗಕ್ಕೆ ಮುಕ್ತಗೊಳಿಸಲು ತೆಗೆದುಕೊಂಡ ಕ್ರಮಗಳೇನು?	

ಸಂಖ್ಯೆ: ನಅಇ 24 ಎಂಎನ್‌ವೈ 2021 (ಇ)

(ಬಿ.ಎಸ್. ಯಡಿಯೂರಪ್ಪ.)
ಮುಖ್ಯಮಂತ್ರಿ